ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ-2023ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ

### ವೇಳಾಪಟ್ಟಿ

| ದಿನಾಂಕ | ದಿನ | ಪರೀಕ್ಷಾ ಸಮಯ |
|---|---|---|
| 12-02-2023 | ಭಾನುವಾರ | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 1.00 ರವರೆಗೆ |

### ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ.ಸಂ | ಬೆಲ್ ಸಂಖ್ಯೆ | ಸಮಯ | ವಿವರಗಳು |
|---|---|---|---|
| 01 | ಮೊದಲನೇ ಬೆಲ್ | ಬೆ. 9.30 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿ ತೋರಿಸಿದ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ ಮತ್ತು ಪ್ರವೇಶ ಪತ್ರದಲ್ಲಿ ಸಹಿ ಮಾಡುತ್ತಾರೆ. |
| 02 | ಎರಡನೇ ಬೆಲ್ | ಬೆ. 9.45 | • ಬೆ. 9.50 ಕ್ಕೆ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು/ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯ ಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. "ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ". ಎಂದು ತೋರಿಸುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಸಮೇತ ಇರುವ ಉತ್ತರ ಪತ್ರಿಕೆಯ ಲಕೋಟೆಯನ್ನು ತೆರೆಯಲು (Question Paper cum Answer Sheet Booklet) ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಅಧಿಕಾರಿ / ಸಿಬ್ಬಂದಿ ವರ್ಗ/ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಬೆ. 9.55 ಕ್ಕೆ ಅಭ್ಯರ್ಥಿಗಳಿಗೆ (Question Paper cum Answer Sheet Booklet) ಪ್ರಶ್ನೆ ಪತ್ರಿಕೆ ಸಮೇತ ಉತ್ತರ ಪತ್ರಿಕೆಯನ್ನು ಹೊಂದಿರುವ ಲಕೋಟೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>• ಅಭ್ಯರ್ಥಿಗಳು ಸದರಿ ಪತ್ರಿಕೆಯಲ್ಲಿ ತಮ್ಮ ಹೆಸರನ್ನು ಬರೆಯಬೇಕು.<br>• ನಂತರ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆ ಸಮೇತ ಇರುವ ಉತ್ತರ ಪತ್ರಿಕೆಯಲ್ಲಿ ಎಚ್ಚರದಿಂದ ನೊಂದಣಿ ಸಂಖ್ಯೆ, ಕೇಂದ್ರ ಸಂಖ್ಯೆ, ವರ್ಷನ್ ಕೋಡ್ ಮತ್ತು ಕ್ರಮ ಸಂಖ್ಯೆಯನ್ನು ಗಳನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ತಪ್ಪದೇ ತುಂಬಬೇಕು.<br>• ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕ್ರಮ ಸಂಖ್ಯೆಯನ್ನು / ವರ್ಷನ್ ಕೋಡ್ ಅನ್ನು ನಾಮಿನಲ್ ರೋಲ್‌ನಲ್ಲಿ ಬರೆಯಬೇಕು. ನಂತರ ಉತ್ತರ ಪತ್ರಿಕೆಯ ನಿಗದಿತ ಜಾಗದಲ್ಲಿ ಸಹಿಯನ್ನೂ ಮಾಡಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಬೆ. 10.00 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಸಮೇತ ಇರುವ ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಈ ಬೆಲ್ ಅಂದರೆ ಬೆ. 10.00 ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ. 11.00 | • ಇದು ಮೊದಲನೆಯ ಎಚ್ಚರಿಕೆ ಬೆಲ್ - ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ. |
| 05 | ಐದನೇ ಬೆಲ್ | ಮ. 12.00 | • ಇದು ಎರಡನೆಯ ಎಚ್ಚರಿಕೆ ಬೆಲ್ - ಪರೀಕ್ಷೆಯ ಎರಡು ಗಂಟೆಗಳ ಅವಧಿ ಮುಗಿದಿರುವುದಕ್ಕಾಗಿ. |
| 06 | ಆರನೆಯ ಬೆಲ್ | ಮ. 12.55 | • ಇದು ಕೊನೆಯ ಎಚ್ಚರಿಕೆಯ ಬೆಲ್ - ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ. |
| 07 | ಏಳನೆಯ ಹಾಗೂ ಕೊನೆಯ ಬೆಲ್ | ಮ. 1.00 | •ಪರೀಕ್ಷೆ ಮುಕ್ತಾಯ. ಅಭ್ಯರ್ಥಿಗಳು ಉತ್ತರಿಸುವುದನ್ನು ನಿಲ್ಲಿಸುವುದು.<br>•ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಎಲ್ಲಾ ಅಭ್ಯರ್ಥಿಗಳು ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು. ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಉತ್ತರ ಪತ್ರಿಕೆಯಲ್ಲಿ ತಮ್ಮ ಸಹಿ ಮಾಡಲು ಸೂಚಿಸಬೇಕು.<br>•ಅಭ್ಯರ್ಥಿಗಳು **"ಪ್ರಶ್ನೆ ಪತ್ರಿಕೆ ಸಮೇತ ಇರುವ ಉತ್ತರ ಪತ್ರಿಕೆ"** ಯನ್ನು ಯಥಾಸ್ಥಿತಿಯಲ್ಲಿ ಕೊಠಡಿ ಮೇಲ್ವಿಚಾರಕರಿಗೆ ನೀಡುವ ಮೊದಲು ತಮ್ಮ ಸಹಿ ಮಾಡಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಿ. ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ **"ಪ್ರಶ್ನೆ ಪತ್ರಿಕೆ ಸಮೇತ ಇರುವ ಉತ್ತರ ಪತ್ರಿಕೆ"** ಪಡೆಯುವುದು.<br>ಗಮನಿಸಿ: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು **"ಪ್ರಶ್ನೆ ಪತ್ರಿಕೆ ಸಮೇತ ಇರುವ ಉತ್ತರ ಪತ್ರಿಕೆ"** ಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಕೊಠಡಿ ಮೇಲ್ವಿಚಾರಕರು ಖಾತ್ರಿ ಮಾಡಿಕೊಳ್ಳಬೇಕು. |

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು